- ದೌರ್ಜನ್ಯಕ್ಕೆ ಒಳಗಾದ ಸಂತ್ರಸ್ಥರು, ಆಯಾ ಜಿಲ್ಲೆಗಳಲ್ಲಿರುವ ಸ್ಥಳೀಯ ಸಾಮಾನ್ಯ ಪೊಲೀಸ್ ಠಾಣೆಗಳಲ್ಲಿ ಅಥವಾ ಜಿಲ್ಲಾ ಕೇಂದ್ರ ಸ್ಥಾನದಲ್ಲಿರುವ ಡಿಸಿಆರ್‌ಇ ವಿಶೇಷ ಪೊಲೀಸ್ ಠಾಣೆಗಳಲ್ಲಿ ಎಫ್‌ಐಆರ್ ಮಾಡುವ ಬಗ್ಗೆ ದೂರುಗಳನ್ನು ದಾಖಲಿಸಬಹುದು. ಸಾಮಾನ್ಯ ಪೊಲೀಸ್ ಠಾಣೆಗಳಲ್ಲಿ ಎಫ್‌ಐಆರ್ ದಾಖಲು ಮಾಡಿದಲ್ಲಿ ಸದರಿ ಪ್ರಕರಣಗಳನ್ನು ಡಿಸಿಆರ್‌ಇ ಪೊಲೀಸ್ ಠಾಣೆಗಳಿಗೆ ವರ್ಗಾಯಿಸತಕ್ಕದ್ದು.
- ಎಲ್ಲಾ ದೌರ್ಜನ್ಯ ತಡೆ ಪ್ರಕರಣಗಳಲ್ಲಿ ಡಿಸಿಆರ್‌ಇ ಪೊಲೀಸ್ ಠಾಣೆಗಳಿಂದ ತನಿಖೆ ನಡೆಸಿ, ಸಂಬಂಧಿಸಿದ ಮಾನ್ಯ ನ್ಯಾಯಾಲಯಗಳಲ್ಲಿ ದೋಷಾರೋಪಣ ಪಟ್ಟಿಯನ್ನು ಸಲ್ಲಿಸತಕ್ಕದ್ದು.
- ಡಿಸಿಆರ್‌ಇ ಘಟಕಗಳನ್ನು ವಿಶೇಷ ಪೊಲೀಸ್ ಠಾಣೆಗಳೆಂದು ಘೋಷಿಸಿ ಸದರಿ ಪೊಲೀಸ್ ಠಾಣೆಗಳ ಸಮರ್ಪಕ ನಿರ್ವಹಣೆಗೆ ಹೆಚ್ಚುವರಿ ಹುದ್ದೆಗಳನ್ನು ಮಂಜೂರು ಮಾಡುವುದರಿಂದ ಡಿಸಿಆರ್‌ಇ ಅಧಿಕಾರಿಗಳು ವಿಶೇಷ ಗಮನಹರಿಸಿ, ಶಿಕ್ಷೆಯ ಪ್ರಮಾಣ ಹೆಚ್ಚಿಸಲು ಕ್ರಮವಹಿಸುವುದು.
- ಡಿಸಿಆರ್‌ಇ ವಿಶೇಷ ಪೊಲೀಸ್ ಠಾಣೆಗಳು ಮತ್ತು ಸ್ಥಳೀಯ ಪೊಲೀಸ್ ಠಾಣೆಗಳ ನಡುವೆ ಸಮರ್ಪಕ ಸಮನ್ವಯತೆಯನ್ನು ಹೊಂದಿರತಕ್ಕದ್ದು. ಆರೋಪಿಗಳನ್ನು ದಸ್ತಗಿರಿ ಮಾಡುವ ಸಂದರ್ಭದಲ್ಲಿ ಜಿಲ್ಲಾ ಪೊಲೀಸ್ ಅಧೀಕ್ಷಕರು ಡಿಸಿಆರ್‌ಇ ಠಾಣೆಗಳಿಗೆ ಅಗತ್ಯವಿರುವ ಹೆಚ್ಚುವರಿ ಪೊಲೀಸ್ ಫೋರ್ಸ್‌ನ್ನು ಒದಗಿಸುವುದು.

ಈ ಆದೇಶವನ್ನು ಸಚಿವ ಸಂಪುಟದ ಟಿಪ್ಪಣಿ ಸಂಖ್ಯೆ:ಸಿ-600/2024, ದಿನಾಂಕ: 28-10-2024ರ ನಿರ್ಣಯದನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

S.V 19/11/2024
(ಕಲಾವತಿ ಎಸ್.ವಿ)
ಸರ್ಕಾರದ ಜಂಟಿ ಕಾರ್ಯದರ್ಶಿ
ಸಮಾಜ ಕಲ್ಯಾಣ ಇಲಾಖೆ

ಸಂಕಲನಕಾರರು, ಕರ್ನಾಟಕ ರಾಜ್ಯ ಪತ್ರ, ಬೆಂಗಳೂರು ಇವರಿಗೆ ಈ ಆದೇಶವನ್ನು ಮುಂದಿನ ಸಂಚಿಕೆಯಲ್ಲಿ ಪ್ರಕಟಿಸಿ, ಅದರ 200 ಪ್ರತಿಗಳನ್ನು ಒಳಾಡಳಿತ ಇಲಾಖೆ, ಪೊಲೀಸ್ ವೆಚ್ಚ ಶಾಖೆಗೆ ಒದಗಿಸಲು ಕೋರಿದೆ.

**<u>ಇವರಿಗೆ</u>**

1) ಮಹಾಲೇಖಪಾಲರು (ಎ ಮತ್ತು ಇ, ಲೆಕ್ಕಪರಿಶೋಧನೆ-1 ಮತ್ತು 2) ಕರ್ನಾಟಕ, ಬೆಂಗಳೂರು.
2) ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ,ಒಳಾಡಳಿತ ಇಲಾಖೆ, ವಿಧಾನಸೌಧ, ಬೆಂಗಳೂರು.
3) ಸರ್ಕಾರದ ಕಾರ್ಯದರ್ಶಿ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಬೆಂಗಳೂರು.
4) ಮಹಾನಿರ್ದೇಶಕರು ಹಾಗೂ ಆರಕ್ಷಕ ಮಹಾನಿರೀಕ್ಷಕರು, ಕರ್ನಾಟಕ, ನೃಪತುಂಗ ರಸ್ತೆ, ಬೆಂಗಳೂರು.

**ಕರ್ನಾಟಕ ಸರ್ಕಾರದ ನಡವಳಿಗಳು**

**ವಿಷಯ:** ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ 33 ಘಟಕಗಳನ್ನು ವಿಶೇಷ ಪೋಲಿಸ್ ಠಾಣೆಗಳೆಂದು ಘೋಷಿಸಲು ಹಾಗೂ ಸದರಿ ಠಾಣೆಗಳ ನಿರ್ವಹಣೆಗಾಗಿ ಅಗತ್ಯವಿರುವ 450 ವಿವಿಧ ಹುದ್ದೆಗಳಿಗೆ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ :**
1) ಸರ್ಕಾರದ ಆದೇಶ ಸಂಖ್ಯೆ:SWD/135/SSC/74 ದಿನಾಂಕ: 07-08-1974.
2) ಸರ್ಕಾರದ ಆದೇಶ ಸಂಖ್ಯೆ:SWD/353/SSC/75 ದಿನಾಂಕ: 27-12-1975.
3) ಸರ್ಕಾರದ ಆದೇಶ ಸಂಖ್ಯೆ: HD/64/POP/94, ದಿನಾಂಕ:28-06-1995.
4) ಸರ್ಕಾರದ ಸುತ್ತೋಲೆ ಸಂಖ್ಯೆ:SWD/105/SAD/2013, ದಿನಾಂಕ: 08-04-2013.
5) ಸರ್ಕಾರದ ಆದೇಶ ಸಂಖ್ಯೆ:ಸಕಇ/59/ಎಸ್‌ಪಿಎ/2021, ದಿನಾಂಕ: 20-05-2022.
6) ಎಡಿಜಿಪಿ, ಡಿಸಿಆರ್‌ಇ ರವರ ಪ್ರಸ್ತಾವನೆ ಸಂಖ್ಯೆ:01/ಡಿಸಿಆರ್‌ಇ/ ಪಿಆರ್‌ಒ /2023 ದಿನಾಂಕ:31.08.2023.
7) ಸಚಿವ ಸಂಪುಟ ನಿರ್ಣಯ ದಿನಾಂಕ:20-06-2024 ಮತ್ತು 28-10-2024.

* * * * *

**ಪ್ರಸ್ತಾವನೆ:**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರ ಆದೇಶದಲ್ಲಿ, ಅಸ್ಪೃಶ್ಯತಾ ನಿಷೇಧ ಕಾಯಿದೆ 1955ನ್ನು ಜಾರಿಗೊಳಿಸಲು ಹಾಗೂ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಾಂಗದವರ ವಿರುದ್ಧ ನಡೆಯುವ ದೌರ್ಜನ್ಯ ಪ್ರಕರಣಗಳಲ್ಲಿ ಪರಿಣಾಮಕಾರಿಯಾಗಿ ಕ್ರಮ ಕೈಗೊಳ್ಳಲು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯವನ್ನು (ಡಿ.ಸಿ.ಆರ್.ಇ) 1974 ರಲ್ಲಿ ಸ್ಥಾಪಿಸಲಾಯಿತು.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ದಿನಾಂಕ:27-12-1975ರ ಆದೇಶದಲಿ, 14 ಅಂಶಗಳಿಗೆ ಸಂಬಂಧಪಟ್ಟಂತೆ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯವು (ಡಿಸಿಆರ್‌ಇ) ಗುಪ್ತಚರ ಮಾಹಿತಿ ಸಂಗ್ರಹಿಸಿ, ತನಿಖೆ ನಡೆಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಆದೇಶಿಸಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (3) ರ ಆದೇಶದಲ್ಲಿ ಡಿಸಿಆರ್‌ಇ ಘಟಕದ ಪೊಲೀಸ್ ಸಬ್ ಇನ್ಸ್‌ಪೆಕ್ಟರ್ ಮತ್ತು ಮೇಲ್ಪಟ್ಟ ಅಧಿಕಾರಿಗಳಿಗೆ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ತಡೆ) ಅಧಿನಿಯಮ, 1989 ರನ್ವಯ ದಾಖಲಾಗುವ ಪ್ರಕರಣಗಳನ್ನು ತನಿಖೆ ನಡೆಸಿ, ಆರೋಪಿಗಳನ್ನು ಬಂಧಿಸಿ ವಿಚಾರಣೆ ನಡೆಸುವ ಅಧಿಕಾರವನ್ನು ನೀಡಲಾಗಿರುತ್ತದೆ.

S.V
19/11/2024

ಮೇಲೆ ಓದಲಾದ ಕ್ರಮ ಸಂಖ್ಯೆ (4) ರ ಆದೇಶದಂತೆ, ಕರ್ನಾಟಕ ಪರಿಶಿಷ್ಟ ಜಾತಿ/ ಪರಿಶಿಷ್ಟ ಪಂಗಡಗಳು ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಮೀಸಲಾತಿ), ನಿಯಮ-7 ರಡಿಯಲ್ಲಿ ಡಿಸಿಆರ್‌ಇ ಘಟಕವು ಸುಳ್ಳು ಜಾತಿ ಪ್ರಮಾಣ ಪತ್ರಗಳ ಪ್ರಕರಣಗಳಲ್ಲಿ ತನಿಖೆಯನ್ನು ಕೈಗೊಂಡು ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿ ಸಲ್ಲಿಸಲಾಗುತ್ತಿದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (5) ರನ್ವಯ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯವನ್ನು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ವರ್ಗಗಳ (ದೌರ್ಜನ್ಯ ನಿಯಂತ್ರಣ) ನಿಯಮಗಳು 1995 ರಂತೆ ರಾಜ್ಯ ಮಟ್ಟದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ರಕ್ಷಣಾ ಘಟಕವೆಂದು ಆದೇಶಿಸಲಾಗಿದೆ.

ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯ (ಡಿಸಿಆರ್‌ಇ) ಘಟಕಗಳಿಗೆ ಪ್ರಸ್ತುತ ಪೊಲೀಸ್ ಠಾಣೆಯ ಸ್ಥಾನಮಾನವಿಲ್ಲದೇ ಇರುವುದರಿಂದ, ಎಫ್‌ಐಆರ್ ದಾಖಲು ಮಾಡಿ ತನಿಖೆ ನಡೆಸಲು ಸಾಧ್ಯವಾಗುತ್ತಿಲ್ಲ. ಆದ್ದರಿಂದ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ 1989 ರಡಿ ಪ್ರಸ್ತುತ ಸ್ಥಳೀಯ ಪೊಲೀಸ್ ಠಾಣೆಯಿಂದಲೇ ದೌರ್ಜನ್ಯ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿ ತನಿಖೆ ನಡೆಸಲಾಗುತ್ತಿದೆ.

ದೌರ್ಜನ್ಯ ಪ್ರಕರಣಗಳನ್ನು ಸ್ಥಳೀಯ ಪೊಲೀಸ್ ಠಾಣೆಗಳಲ್ಲಿ ದಾಖಲಿಸಿ ತನಿಖೆ ಮಾಡಿ ನ್ಯಾಯಾಲಯಗಳಿಗೆ ವರದಿಯನ್ನು ಸಲ್ಲಿಸಲಾಗುತ್ತಿದ್ದು, ಸ್ಥಳೀಯ ಠಾಣೆಗಳಿಲ್ಲಿರುವ ಇತರೆ ಕರ್ತವ್ಯಗಳ ಒತ್ತಡಗಳಿಂದ ದೌರ್ಜನ್ಯ ಪ್ರಕರಣಗಳಲ್ಲಿ ವಿವರವಾದ ತನಿಖೆ ನಡೆಸಿ, ನಿಗಧಿತ ಅವಧಿಯೊಳಗೆ ಪೂರ್ಣಗೊಳಿಸಿ, ಮಾನ್ಯ ನ್ಯಾಯಾಲಯಗಳಲ್ಲಿ ದೋಷಾರೋಪಣ ಪಟ್ಟಿ ಸಲ್ಲಿಸುವ ಬಗ್ಗೆ ವಿಳಂಬವಾಗುತ್ತಿದೆ.

ಮುಂದುವರೆದು, ಕರ್ನಾಟಕ ರಾಜ್ಯದಲ್ಲಿ ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ (ದೌರ್ಜನ್ಯ ಪ್ರತಿಬಂಧ) ಅಧಿನಿಯಮ, 1989ರಡಿ ದಾಖಲಾದ ಪ್ರಕರಣಗಳಲ್ಲಿ ಶಿಕ್ಷೆಯ ಪ್ರಮಾಣ ಕಡಿಮೆ ಇರುತ್ತದೆ. ಆದ್ದರಿಂದ ದೌರ್ಜನ್ಯ ತಡೆ ಪ್ರಕರಣಗಳಲ್ಲಿ ಎಫ್‌ಐಆರ್ ದಾಖಲಿಸಿ, ನಿಗಧಿತ ಸಮಯದೊಳಗೆ ತನಿಖೆ ನಡೆಸಿ, ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣ ಪಟ್ಟಿಗಳನ್ನು ಸಲ್ಲಿಸುವ ಬಗ್ಗೆ ಪರಿಣಾಮಕಾರಿಯಗಿ ಕಾರ್ಯನಿರ್ವಹಿಸಲು ಡಿಸಿಆರ್‌ಇ ಘಟಕಗಳನ್ನು ವಿಶೇಷ ಪೊಲೀಸ್ ಠಾಣೆಗಳೆಂದು ಘೋಷಿಸುವುದು ಅವಶ್ಯಕವಿದೆ.

ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಗಳ ಜನಾಂಗದವರ ವಿರುದ್ಧ ನಡೆಯುವ ದೌರ್ಜನ್ಯ ಪ್ರಕರಣಗಳಲ್ಲಿ ದೂರು ದಾಖಲಿಸಿ, ನಿಗಧಿತ ಅವಧಿಯಲ್ಲಿ ಸೂಕ್ತ ತನಿಖೆ ನಡೆಸಿ ದೋಷಾರೋಪಣ ಪಟ್ಟಿಯನ್ನು ಮಾನ್ಯ ನ್ಯಾಯಾಲಯಗಳಲ್ಲಿ ಸಲ್ಲಿಸಲು ಪ್ರತಿ ಜಿಲ್ಲೆಗೆ ಒಂದರಂತೆ ಹಾಗೂ ಬೆಂಗಳೂರು ನಗರಕ್ಕೆ 02 ರಂತೆ ರಾಜ್ಯದಲ್ಲಿ ಒಟ್ಟು 33 ಡಿಸಿಆರ್‌ಇ ವಿಶೇಷ ಪೊಲೀಸ್ ಠಾಣೆಗಳನ್ನು ಸ್ಥಾಪಿಸಲು ಮತ್ತು ಸದರಿ 33 ವಿಶೇಷ ಪೊಲೀಸ್ ಠಾಣೆಗಳ ನಿರ್ವಹಣೆಗಾಗಿ ಡಿಸಿಆರ್‌ಇ ಘಟಕದಲ್ಲಿ ಹಾಲಿ ಇರುವ 340 ಹುದ್ದೆಗಳ ಜೊತೆಗೆ ಹೆಚ್ಚುವರಿಯಾಗಿ ಈ ಕೆಳಕಂಡ 450 ವಿವಿಧ ವೃಂದದ ಹುದ್ದೆಗಳನ್ನು ಮಂಜೂರು ಮಾಡುವಂತೆ ಮೇಲೆ ಓದಲಾದ ಕ್ರಮ ಸಂಖ್ಯೆ (6) ರಲ್ಲಿ ಹೆಚ್ಚುವರಿ ಪೊಲೀಸ್ ಮಹಾನಿರ್ದೇಶಕರು, ಡಿಸಿಆರ್‌ಇ ಇವರು ಪ್ರಸ್ತಾವನೆ ಸಲ್ಲಿಸಿರುತ್ತಾರೆ.

S.V
19/11/2024

| ಕ್ರ.ಸಂ. | ಹುದ್ದೆಗಳ ಪದನಾಮ | ಹುದ್ದೆಗಳ ಸಂಖ್ಯೆ |
|---|---|---|
| ಪೊಲೀಸ್ ಅಧಿಕಾರಿ/ ಸಿಬ್ಬಂದಿಗಳ ವರ್ಗ | | |
| 01 | ಪೊಲೀಸ್ ಅಧೀಕ್ಷಕರು | 03 |
| 02 | ಪೊಲೀಸ್ ಉಪಾಧೀಕ್ಷಕರು | 03 |
| 03 | ಪೊಲೀಸ್ ಇನ್ಸ್‌ಪೆಕ್ಟರ್ (ನಿಸ್ತಂತು) | 01 |
| 04 | ಆರ್‌ಪಿಐ | 01 |
| 05 | ಪಿ.ಎಸ್.ಐ | 7 |
| 06 | ಸಿ.ಹೆಚ್.ಸಿ | 110 |
| 07 | ಹೆಚ್.ಸಿ. (ನಿಸ್ತಂತು) | 02 |
| 08 | ಎ.ಹೆಚ್.ಸಿ. | 29 |
| 09 | ಸಿ.ಪಿ.ಸಿ. | 208 |
| 10 | ಪಿ.ಸಿ.(ನಿಸ್ತಂತು) | 04 |
| 11 | ಎ.ಪಿ.ಸಿ (ಚಾಲಕರು) | 26 |
| (ಅ) ಒಟ್ಟು | | 394 |
| ಲಿಪಿಕ ಮತ್ತು ಇತರೆ ಸಿಬ್ಬಂದಿ ವರ್ಗ | | |
| 01 | ಆಂತ್ರೊಪಾಲಜಿಸ್ಟ್ | 01 |
| 02 | ಶಾಖಾಧೀಕ್ಷಕರು | 08 |
| 03 | ಶೀಘ್ರಲಿಪಿಗಾರರು | 04 |
| 04 | ಪ್ರ.ದ.ಸ | 04 |
| 05 | ದ್ವಿ.ದ.ಸ. | 05 |
| 06 | ಗ್ರೂಪ್ 'ಡಿ' | 34 |
| (ಆ) ಒಟ್ಟು | | 56 |
| (ಅ + ಆ) ಒಟ್ಟು | | 450 |

ಸದರಿ ಪ್ರಸ್ತಾವನೆಯನ್ನು ದಿನಾಂಕ: 20-06-2024 ರಂದು ನಡೆದ ಸಚಿವ ಸಂಪುಟ ಸಭೆಯ ಮುಂದೆ ಸಲ್ಲಿಸಲಾಗಿರುತ್ತದೆ. ಸಚಿವ ಸಂಪುಟವು ತಾತ್ವಿಕ ಅನುಮೋದನೆ ನೀಡಿರುತ್ತದೆ. ಮುಂದುವರೆದು, ಅಧಿಸೂಚನೆ ಹೊರಡಿಸುವ ಪೂರ್ವದಲ್ಲಿ ಪ್ರಮಾಣಿತ ಕಾರ್ಯಾಚರಣೆ ವಿಧಾನ (SOP) ಠಾಣೆಗಳಿಗೆ ಬೇಕಾಗುವ ಮೂಲಸೌಕರ್ಯಗಳು, ಅಗತ್ಯ ಸಿಬ್ಬಂದಿ, ನೇಮಕಾತಿ ಇವುಗಳ ಅವಶ್ಯಕತೆ ಗಮನಿಸಿದ ಸಚಿವ ಸಂಪುಟವು ಇವುಗಳ ಕುರಿತು ಗೃಹ ಸಚಿವರು ಮತ್ತು ಸಮಾಜ ಕಲ್ಯಾಣ ಸಚಿವರು ಪರಸ್ಪರ ಚರ್ಚಿಸಿದ ನಂತರ ಇವುಗಳನ್ನು ಒಳಗೊಂಡು ಪ್ರಸ್ತಾವನೆಯನ್ನು ಸಚಿವ ಸಂಪುಟಕ್ಕೆ ಸಲ್ಲಿಸುವಂತೆ ಸಚಿವ ಸಂಪುಟವು ಇಲಾಖೆಗೆ ಸೂಚಿಸಿತು.

ಸಚಿವ ಸಂಪುಟದ ನಿರ್ದೇಶನದಂತೆ, ಮಾನ್ಯ ಗೃಹ ಸಚಿವರು ಮತ್ತು ಮಾನ್ಯ ಸಮಾಜ ಕಲ್ಯಾಣ ಸಚಿವರುಗಳು ದಿನಾಂಕ: 04-07-2024 ರಂದು, ಒಳಾಡಳಿತ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಆರ್ಥಿಕ ಇಲಾಖೆಗಳ ಅಧಿಕಾರಿಗಳೊಂದಿಗೆ ಸಭೆ ನಡೆಸಿ, ದೌರ್ಜನ್ಯ ತಡೆ ಪ್ರಕರಣಗಳಲ್ಲಿ ಪರಿಣಾಮಕಾರಿಯಾಗಿ ಕಾರ್ಯನಿರ್ವಹಿಸಲು ಮತ್ತು ದೌರ್ಜನ್ಯ ಪ್ರಕರಣಗಳು ಆಗದಂತೆ ಕ್ರಮವಹಿಸಲು ಡಿಸಿಆರ್‌ಇ ಘಟಕಗಳನ್ನು ವಿಶೇಷ ಪೊಲೀಸ್ ಠಾಣೆಗಳೆಂದು ಘೋಷಿಸುವುದು ಮತ್ತು ಶಿಕ್ಷೆಯ ಪ್ರಮಾಣವನ್ನು ಇತರೆ ರಾಜ್ಯಗಳಂತೆ ಹೆಚ್ಚಿಸುವುದು ಅಗತ್ಯವಿದೆ ಎಂದು ಪರಿಗಣಿಸಿ, ಡಿಸಿಆರ್‌ಇ ಪ್ರಸ್ತಾವನೆಯನ್ನು ಮತ್ತೊಮ್ಮೆ ಸಚಿವ ಸಂಪುಟಕ್ಕೆ ಸಲ್ಲಿಸಲು ನಿರ್ಧರಿಸಲಾಯಿತು.

S.V
19/11/2024

ಅದರಂತೆ, ದಿನಾಂಕ:28-10-2024 ರಂದು ನಡೆದ ಸಚಿವ ಸಂಪುಟ ಸಭೆಯ ಮಂದೆ ಪ್ರಸ್ತಾವನೆಯನ್ನು ಮಂಡಿಸಿ, ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ 33 ಘಟಕಗಳನ್ನು ವಿಶೇಷ ಪೊಲೀಸ್ ಠಾಣೆಗಳೆಂದು ಘೋಷಿಸಲು ಹಾಗೂ ಸದರಿ ಠಾಣೆಗಳ ನಿರ್ವಹಣೆಗಾಗಿ 450 ವಿವಿಧ ಹುದ್ದೆಗಳಿಗೆ ಮಂಜೂರಾತಿ ನೀಡುವ ಬಗ್ಗೆ ಸಚಿವ ಸಂಪುಟವು ಅನುಮೋದನೆ ನೀಡಿರುತ್ತದೆ.

ಮೇಲ್ಕಂಡ ಪ್ರಸ್ತಾವನೆಯನ್ನು ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂ: ಸಕಇ 103 ಪಕವಿ 2023 ಬೆಂಗಳೂರು, ದಿನಾಂಕ:19-11-2024.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಈ ಕೆಳಕಂಡಂತೆ ಕ್ರಮವಹಿಸಲು ಆದೇಶಿಸಿದೆ.

- ಭಾರತೀಯ ನಾಗರೀಕ ಸುರಕ್ಷಾ ಸಂಹಿತೆ 2023 (BNSS Act, 2023) ರ ಕಲಂ 2(u) ರಡಿಯಲ್ಲಿ ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ 33 ಘಟಕಗಳನ್ನು ವಿಶೇಷ ಪೋಲೀಸ್ ಠಾಣೆಗಳೆಂದು ಸ್ಥಾಪಿಸಲು ಅನುಬಂಧ-1 ರಂತೆ ಒಳಾಡಳಿತ ಇಲಾಖೆಯಿಂದ ಅಧಿಸೂಚನೆ ಹೊರಡಿಸುವುದು.
- ಡಿಸಿಆರ್‌ಇ ವಿಶೇಷ ಪೋಲೀಸ್ ಠಾಣೆಗಳನ್ನು ನಿರ್ವಹಿಸಲು 450 ಹೊಸ ಹುದ್ದೆಗಳನ್ನು ಅನುಬಂಧ-2 ರಲ್ಲಿರುವಂತೆ ಮಂಜೂರು ಮಾಡಲಾಗಿದೆ ಮತ್ತು ಸದರಿ ಹುದ್ದೆಗಳನ್ನು ನಿಯೋಜನೆ ಮೇಲೆ ಒಳಾಡಳಿತ ಇಲಾಖೆಯಿಂದ ಭರ್ತಿ ಮಾಡುವುದು.
- 33 ವಿಶೇಷ ಪೊಲೀಸ್ ಠಾಣೆಗಳಿಗೆ ಕಟ್ಟಡಗಳು ಸೇರಿದಂತೆ ಅಗತ್ಯ ಮೂಲಭೂತ ಸೌಕರ್ಯಗಳನ್ನು ಒದಗಿಸುವ ಕುರಿತು ಡಿಸಿಆರ್‌ಇ ರವರು ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆ ಸಲ್ಲಿಸುವುದು.
- ಸದರಿ ಮೂಲಭೂತ ಸೌಕರ್ಯಗಳಿಗೆ ತಗಲುವ ಅನಾವರ್ತಕ ವೆಚ್ಚ (ಬಂಡವಾಳ ವೆಚ್ಚ) ಅನುದಾನ ಪಡೆಯುವ ಬಗ್ಗೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲು ಕ್ರಮವಹಿಸುವುದು.
- ಡಿಸಿಆರ್‌ಇ ಯ 33 ವಿಶೇಷ ಪೊಲೀಸ್ ಠಾಣೆಗಳ ನಿರ್ವಹಣೆಗೆ ಭರಿಸಬೇಕಾದ ವೆಚ್ಚವನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಶೇ.50:50 ಅನುಪಾತದಲ್ಲಿ ರಾಜ್ಯ ಮತ್ತು ಕೇಂದ್ರ ಸರ್ಕಾರಗಳಿಂದ Committed liabilities ಷರತ್ತಿಗೊಳಪಟ್ಟು ಭರಿಸಲು ಮತ್ತು ಅನುದಾನ ಕೊರತೆಯಾದಲ್ಲಿ ಅದನ್ನು ರಾಜ್ಯ ಸರ್ಕಾರದ SCSP/TSP ಯೋಜನೆಯ ನಿಧಿಯಿಂದ ಭರಿಸುವುದು.
- ಒಳಾಡಳಿತ ಇಲಾಖೆ/ಡಿಜಿ & ಐಜಿಪಿ ರವರು ಪೊಲೀಸ್ ಇನ್ಸ್‌ಪೆಕ್ಟರ್ ಮತ್ತು ಮೇಲ್ಪಟ್ಟ ದರ್ಜೆಯ ಅಧಿಕಾರಿಗಳನ್ನು ನಾಗರೀಕ ಹಕ್ಕು ಜಾರಿ ನಿರ್ದೇಶನಾಲಕ್ಕೆ ನಿಯುಕ್ತಿಗೊಳಿಸುವ ಮುನ್ನ ಸಮಾಜ ಕಲ್ಯಾಣ ಇಲಾಖೆಯ ಸಹಮತಿ ಪಡೆಯವುದು.
- ನಾಗರೀಕ ಹಕ್ಕು ಜಾರಿ ನಿರ್ದೇಶನಾಲಯದ ವಿಶೇಷ ಪೊಲೀಸ್ ಠಾಣೆಗಳು ಒಳಾಡಳಿತ ಇಲಾಖೆ ಅಥವಾ ಸಮಾಜ ಕಲ್ಯಾಣ ಇಲಾಖೆಗಳು ಕಳುಹಿಸುವ ದೂರುಗಳನ್ನು ಎಫ್‌ಐಆರ್ ದಾಖಲಿಸಿ ತನಿಖೆ ಕೈಗೊಳ್ಳುವುದು.

S.V
19/11/2024